ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	739
ಸದಸ್ಯರ ಹೆಸರು	:	ಶ್ರೀ ಬಿ.ಎಂ. ಫಾರೂಕ್
ಉತ್ತರಿಸಬೇಕಾದ ದಿನಾಂಕ	:	22.02.2022
ಉತ್ತರಿಸಬೇಕಾದ ಸಚಿವರು	:	ನಗರಾಭಿವೃದ್ಧಿ ಸಚಿವರು

	ಪ್ರಶ್ನೆ	ಉತ್ತರ
ಅ)	ಇತ್ತೀಚೆಗೆ ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಪಚ್ಚನಾಡಿ ಡಂಪಿಂಗ್ ಯಾರ್ಡ್ ಪರಿಸರದಲ್ಲಿ ಭಾರಿ ಬೆಂಕಿ ಬಿದ್ದಿರುವುದರಿಂದ ಸ್ಥಳೀಯರು ಆತಂಕಗೊಂಡಿರುವುದು ನಿಜವೇ;	ಹೌದು. ಇತ್ತೀಚೆಗೆ ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಪಚ್ಚನಾಡಿ ಘನತ್ಯಾಜ್ಯ ವಿಲೇವಾರಿಯ ನೆಲಭರ್ತಿ ಜಾಗದಲ್ಲಿ ತ್ಯಾಜ್ಯದ ಒಳ ಉಷ್ಣಾಂಶ ಹೆಚ್ಚಾದ ಕಾರಣ ಹಳೆಯ ಪಾರಂಪರಿಕ ತ್ಯಾಜ್ಯದಿಂದ 2 ಬಾರಿ ಕಾಣಿಸಿಕೊಂಡ ಬೆಂಕಿಯನ್ನು ಪಾಲಿಕೆ ವತಿಯಿಂದ ಹಾಗೂ ಅಗ್ನಿ ಶಾಮಕ ದಳದ ಸಹಾಯ ಪಡೆದು ಬೆಂಕಿಯನ್ನು ಸಂಪೂರ್ಣವಾಗಿ ನಂದಿಸಲಾಗಿದೆ.
ಆ)	ಮಹಾನಗರ ಪಾಲಿಕೆ ವ್ಯಾಪ್ತಿಯಷ್ಟೇ ಅಲ್ಲದೆ ಹೊರಭಾಗದ ತ್ಯಾಜ್ಯವನ್ನು ಕೂಡ ಇಲ್ಲೇ ತಂದು ಸುರಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ. ಉಳ್ಳಾಲ ನಗರ ಸಭೆ, ಕೋಟೆಕಾರು ಪಟ್ಟಣ ಪಂಚಾಯತಿ ಮತ್ತು ಇತರೆ ಖಾಸಗಿ ಸಂಸ್ಥೆಗಳ ಮನವಿಯ ಮೇರೆಗೆ ತಾತ್ಕಾಲಿಕವಾಗಿ ನಿಗಧಿಪಡಿಸಲಾಗಿರುವ ಶುಲ್ಕ ಪಾವತಿಸಿಕೊಂಡು ವಿಂಗಡಿಸಿದ ತ್ಯಾಜ್ಯವನ್ನು ಮಾತ್ರ ಪಚ್ಚನಾಡಿಯ ತ್ಯಾಜ್ಯ ನಿರ್ವಹಣಾ ಘಟಕದಲ್ಲಿ ವಿಲೇವಾರಿ ಮಾಡಲು ಅನುಮತಿ ನೀಡಲಾಗಿರುತ್ತದೆ.
ಇ)	ಪ್ರತಿ ವರ್ಷ ಬಿಸಿಲಿನ ಪ್ರಖರತೆಗೆ ಸದರಿ ಡಂಪಿಂಗ್ ಯಾರ್ಡ್ ನಲ್ಲಿ ಬೆಂಕಿ ಬೀಳುತ್ತಿರುವುದರಿಂದ, ದಟ್ಟ ಹೊಗೆ ಹಾಗೂ ವಾಸನೆಯಿಂದ ಜನರು ಕಂಗೆಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ. ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಪಚ್ಚನಾಡಿ ಘನತ್ಯಾಜ್ಯ ವಿಲೇವಾರಿಯ ನೆಲಭರ್ತಿ ಜಾಗದಲ್ಲಿ ತ್ಯಾಜ್ಯದ ಒಳ ಉಷ್ಣಾಂಶ ಹೆಚ್ಚಾದ ಸಂದರ್ಭದಲ್ಲಿ ಈ ಹಿಂದೆ ಕೆಲವೊಮ್ಮೆ ಬೆಂಕಿ ಕಾಣಿಸಿಕೊಂಡಾಗ ಪಾಲಿಕೆಯ ವತಿಯಿಂದ ಕೂಡಲೇ ಬೆಂಕಿಯ ತೀವ್ರತೆಯನ್ನು ಕಡಿಮೆಗೊಳಿಸಲು ಅಗತ್ಯ ಕ್ರಮ ಕೈಗೊಳ್ಳುವುದರ ಜೊತೆಗೆ ಅಗ್ನಿ ಶಾಮಕ ದಳದ ಸಹಾಯ ಪಡೆದು ಬೆಂಕಿಯನ್ನು ಸಂಪೂರ್ಣವಾಗಿ ನಂದಿಸಲಾಗಿರುತ್ತದೆ. ಇತ್ತೀಚೆಗೆ ಯಾವುದೇ ತೀವ್ರವಾದ ಬೆಂಕಿ ಅವಘಡಗಳು ಸಂಭವಿಸಿರುವುದಿಲ್ಲ.

ಈ)	ಹೌದಾದಲ್ಲಿ ಈ ಸಂಬಂಧ ಸರ್ಕಾರ ಕೈಗೊಳ್ಳುವ ಕ್ರಮಗಳಾವುವು?	• ಮಂಗಳೂರು ಮಹಾನಗರ ಪಾಲಿಕೆಯ ವತಿಯಿಂದ ನೆಲಭರ್ತಿ ಜಾಗದಲ್ಲಿ ದಿನದ 24 ಗಂಟೆಗಳಲ್ಲಿ ಕಾವಲುಗಾರರನ್ನು ನೇಮಿಸಲಾಗಿದ್ದು, ಸಿ.ಸಿ. ಟಿವಿ ಕ್ಯಾಮರಾಗಳನ್ನು ಅಳವಡಿಸಿ ಪಾಲಿಕೆಯ ನಿಯಂತ್ರಣ ಕೊಠಡಿಯಿಂದ ಪರಿಶೀಲಿಸಲಾಗುತ್ತಿದೆ. • ಆಕಸ್ಮಿಕವಾಗಿ ಸಂಭವಿಸಿದ ಬೆಂಕಿಯನ್ನು ನಂದಿಸಲು ಸ್ವಚ್ಛಭಾರತ್ ಮಿಷನ್ ಮತ್ತು ಪಾಲಿಕೆಯ ಅನುದಾನದಿಂದ FIRE EXTINGUISHERS / FIRE HYDRANTS ಮತ್ತು ನೀರಿನ ಟ್ಯಾಂಕರ್ ಗಳ ವ್ಯವಸ್ಥೆ ಹಾಗೂ ಇತರೆ ಅವಶ್ಯಕ ಸುರಕ್ಷಾ ಪರಿಕರಗಳ ವ್ಯವಸ್ಥೆಯನ್ನು ಈಗಾಗಲೇ ಪಾಲಿಕೆಯ ವತಿಯಿಂದ ಮಾಡಲಾಗಿದೆ. • ಪಚ್ಚನಾಡಿ ಘನತ್ಯಾಜ್ಯ ಸಂಸ್ಕರಣಾ ಮತ್ತು ವಿಲೇವಾರಿ ಜಾಗದಲ್ಲಿ ಸಂಪೂರ್ಣವಾದ ಅಗ್ನಿ ಸುರಕ್ಷತಾ ಕ್ರಮಗಳನ್ನು ಅಳವಡಿಸಲು ವಿಸ್ತೃತ ಯೋಜನಾ ವರದಿ ಸಿದ್ದಪಡಿಸಲಾಗುತ್ತಿದೆ. • ನೆಲಭರ್ತಿ ಜಾಗದಲ್ಲಿ ಪಾರಂಪರಿಕ ತ್ಯಾಜ್ಯದ ನಿರ್ವಹಣೆಗಾಗಿ (LEGACY WASTE MANAGEMENT THROUGH BIO-MINING AND BIO REMEDIATION) ಈಗಾಗಲೇ ಟೆಂಡರ್ ಕರೆದಿದ್ದು, ಪ್ರಕ್ರಿಯೆಯು ಅಂತಿಮ ಹಂತದಲ್ಲಿರುತ್ತದೆ.

ನಅಇ 13 ಎಂಎಂಸಿ 2022 (ಇ)

(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು

(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು